## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ನಾಗರಾಜು, ಕಾರ್ಯದರ್ಶಿ (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ), ಕೇತುಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/264/ಗ್ರಾಪಂಕಾ/2015, ದಿನಾಂಕ:08-06-2015.
2. ಅಪರ ನಿಬಂಧಕರು, ವಿಚಾರಣೆಗಳು-07(I/c), ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE-330/2015/ARE-7 Date:30-03-2017.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/ ARE-7/DE-330/2015 Date:31-03-2017.
4. ಸರ್ಕಾರದ ಪತ್ರ ಸಂಖ್ಯೆ:289/ಗ್ರಾಪಂಕಾ/2017 ದಿನಾಂಕ:07-04-2018.
5. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪರಿಷ್ಕೃತ ಶಿಫಾರಸ್ಸು ಸಂಖ್ಯೆ: UPLOK-2/ ARE-7/DE-330/2015 Date:19-05-2018.
6. ಸರ್ಕಾರದ ಪರಿಷ್ಕೃತ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/289/ಗ್ರಾಪಂಕಾ/2017, ದಿನಾಂಕ:25-10-2018.
7. ಶ್ರೀ ನಾಗರಾಜು, ಕಾರ್ಯದರ್ಶಿ (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಇವರು ಸರ್ಕಾರದ ಪರಿಷ್ಕೃತ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:20-12-2018.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ನಾಗರಾಜು, ಕಾರ್ಯದರ್ಶಿ, (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ), ಕೇತುಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:264:ಗ್ರಾಪಂಕಾ:2015, ದಿನಾಂಕ:08-06-2015 ರಲ್ಲಿ ವಹಿಸಲಾಗಿತ್ತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು-07, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ"

"ದೂರುದಾರರಾದ ಶ್ರೀ ಕೆ.ಸಿ. ನಿಂಗೇಗೌಡ ತಂದೆ ಚಿಕ್ಕಮೊಗೇಗೌಡ, ಕೇತುಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರು ತಮ್ಮ ದೂರಿನಲ್ಲಿ ಶ್ರೀ ಬಿ.ಪಿ ನಾಗರಾಜು, ಕಾರ್ಯದರ್ಶಿ (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಕೇತುಪುರ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಅವರ ಪಕ್ಕದ ಮನೆಯ ಶ್ರೀಮತಿ ಮಂಗಳಮ್ಮ ಮತ್ತು ಅವರ ಮಗ ಸಾರ್ವಜನಿಕರು ತಿರುಗಾಡುವ ರಸ್ತೆಗೆ ಅಡ್ಡಪಡಿಸಿ ತೊಂದರೆ ನೀಡುತ್ತಿರುವುದಾಗಿ ಜಿಲ್ಲಾಧಿಕಾರಿ, ಮೈಸೂರು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಮೈಸೂರು, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಟಿ.ನರಸೀಪುರ ಹಾಗೂ ಪೊಲೀಸರಿಗೆ ದೂರು ಸಲ್ಲಿಸಿದ್ದು, ಸದರಿ ದೂರಿಗೆ ಸಂಬಂಧಿಸಿದಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಮೈಸೂರು ಮತ್ತು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಟಿ.ನರಸೀಪುರ ಇವರುಗಳು ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ, ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದರೂ ಶ್ರೀ ಹೆಚ್.ಬಿ ನಾಗರಾಜು, ಕಾರ್ಯದರ್ಶಿ (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ), ಕೇತುಪುರ ಗ್ರಾಮ ಪಂಚಾಯಿತಿ,

ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ರವರು ಯಾವುದೇ ಕ್ರಮ ಕೈಗೊಳ್ಳದೆ ಕರ್ತವ್ಯಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ಕರ್ತವ್ಯ ನಿಷ್ಠೆಯನ್ನು ಪಾಲಿಸದೆ ಮತ್ತು ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ/ದುರ್ವರ್ತನೆಯಿಂದ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ ನಿಯಮಗಳು (ನಡತೆ) 1966, ನಿಯಮ 3(1)(i) ರಿಂದ (iii)ರಡಿಯಲ್ಲಿ ಉಕ್ತವಾದ ದುರ್ನಡತೆ ಎಸಗಿದ್ದೀರಿ ಅಂತ ಇವರ ಮೇಲೆ ದೋಷಾರೋಪಣೆಯನ್ನು ಮಾಡಲಾಗಿದೆ".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ವರದಿಯಲ್ಲಿ ಶ್ರೀ ನಾಗರಾಜು, ಕಾರ್ಯದರ್ಶಿ (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ), ಕೇತುಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ರವರ ವಿರುದ್ಧ ಆಪಾದನೆ ಸಾಬೀತಾಗಿರುವುದರಿಂದ ಒಂದು ವಾರ್ಷಿಕ ವೇತನವನ್ನು ಬಡ್ತಿಯನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ದಂಡನೆ ವಿಧಿಸುವಂತೆ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಮಾನ್ಯ ತಮ್ಮ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ನಿಬಂಧಕರು, ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ವರದಿಯಲ್ಲಿ ಕರ್ನಾಟಕ ಲೋಕಾಯುಕ್ತ ರವರು ದಿನಾಂಕ:19-05-2018 ರಂದು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕೃತ ಶಿಫಾರಸ್ಸಿನಲ್ಲಿ ಶ್ರೀ ನಾಗರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬೇನಕನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ದಿನಾಂಕ:19-02-2007 ರಿಂದ 17-07-2018 ರವರೆಗೆ ಕರ್ತವ್ಯ ನಿರ್ವಹಿಸಿದ ಅವಧಿಯಲ್ಲಿ ಎಸಗಿದ ಹಣ ದುರುಪಯೋಗ ಹಾಗೂ ಕರ್ತವ್ಯ ಲೋಪದ ಆರೋಪಗಳು ಸಾಬೀತಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(VI)ರ ಅನ್ವಯ ಸರ್ಕಾರಿ ಸೇವೆಯಿಂದ ಕಡ್ಡಾಯವಾಗಿ ನಿವೃತ್ತಿಗೊಳಿಸಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ವರದಿಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ರವರ ಆದೇಶ ಸಂಖ್ಯೆ:ಸಿ.ಸಿಎ/58:2009-10, ದಿನಾಂಕ:19-04-2017 ರಂದು ಕರ್ನಾಟಕ ನಾಗರೀಕ ಸೇವಾ ನಿಯಮ 214(1)(ಎ) ಅನುಸಾರ "ನಿವೃತ್ತಿ ವೇತನದಲ್ಲಿ ಶೇ.5% ರಷ್ಟು 5 ವರ್ಷಗಳವರೆಗೆ ತಡೆಹಿಡಿಯುವ" ಎಂಬ ದಂಡನೆಯನ್ನು ವಿಧಿಸುವಂತೆ ತಮ್ಮ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ನಾಗರಾಜು, ಕಾರ್ಯದರ್ಶಿ, (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ), ಕೇತುಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (5)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟಿಸಿಗೆ ಅವರು ಮೇಲೆ ಕ್ರಮ ಸಂಖ್ಯೆ (6)ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ. ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರು ಅವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ಪ್ರಮುಖವಾಗಿ ವರದಿಯ ಕಂಡಿಕೆಯಲ್ಲಿ ಮೇಲ್ಕಂಡ ಅಂಶಗಳನ್ನು ಅಲ್ಲಗಳೆಯಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ. ಅವುಗಳ ಸಂಕ್ಷಿಪ್ತ ಸಾರಾಂಶ ಈ ಕೆಳಗಿನಂತಿದೆ.

The photographs Ex.P-5 shows that in the galli the water is stagnant , there is garbage between two houses. The Deputy Commissioner directed the Superintendent of Police and Executive Officer to take suitable action. In turn thje chief Executive Officer, Zilla Panchayath, Mysore direction the Executive Officer, Zilla Panchayath to take suitable action. Then Mangalamma has given put up across the road, within seven days. Also undertaking not to drain the waste water, cattle urine in the galli and not to urinate in the galli. The Office of Deputy Commissioner also directed Executive Officer Taluk Panchayath and PDO

Kethupura Gram Panchayath to take action as per Ex.P.11. In turn the office of Taluk Panchayath also directed the PDO Kethupura Gram Panchayath to take action. But DGO has not taken any action.

Inspite of giving sufficient opportuntitiesDGO has not filed his written statement. Subsequently remained absent. Hence he was placed Exparte. This attitude of DGO also strengthens the contention of the complainant that DGO has committed misconduct. Thereby DGO being/Government servant has failed maintain absolute integrity and devotion to duty and committed an act which is unbecoming of Government Servants. Hence I proceed to answer Point No.1 in the AFFIRMATIVE.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀರ್ಮಾನಕ್ಕೆ ಅನುಗುಣವಾಗಿ ಶ್ರೀ ನಾಗರಾಜು, ಕಾರ್ಯದರ್ಶಿ, (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ), ಕೇತುಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ರವರ ವಿರುದ್ಧ ಆಪಾದನೆ ಸಾಬೀತಾಗಿರುವುದರಿಂದ ಹಾಗೂ ಇವರು ಸರ್ಕಾರಿ ಸೇವೆಯಿಂದ ಈಗ ನಿವೃತ್ತರಾಗಿರುವ ಕಾರಣ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(ಎ) ಅನುಸಾರ **"ನಿವೃತ್ತಿ ವೇತನದಲ್ಲಿ ಶೇ.5% ರಷ್ಟು 5 ವರ್ಷಗಳವರೆಗೆ ತಡೆಹಿಡಿಯುವ"** ದಂಡನೆಯನ್ನು ವಿಧಿಸಲು ಮಾನ್ಯ ಉಪಲೋಕಾಯುಕ್ತರು ತಮ್ಮ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತವೆ. ಆದುದರಿಂದ ಶ್ರೀ ಹೆಚ್.ಬಿ ನಾಗರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಪರಿಶೀಲಿಸಿ ಶ್ರೀ ನಾಗರಾಜು, ಕಾರ್ಯದರ್ಶಿ (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ), ಕೇತುಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ರವರ ವಿರುದ್ಧ ಆಪಾದನೆ ಸಾಬೀತಾಗಿರುವುದರಿಂದ ಹಾಗೂ ಇವರು ಸರ್ಕಾರಿ ಸೇವೆಯಿಂದ ಈಗ ನಿವೃತ್ತರಾಗಿರುವ ಕಾರಣ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(ಎ) ಅನುಸಾರ **"ನಿವೃತ್ತಿ ವೇತನದಲ್ಲಿ ಶೇ.5% ರಷ್ಟು 5 ವರ್ಷಗಳವರೆಗೆ ತಡೆಹಿಡಿಯುವ"** ಎಂಬ ದಂಡನೆಯನ್ನು ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:289:ಗ್ರಾಪಂಕಾ:2017</u>**

**<u>ಬೆಂಗಳೂರು, ದಿನಾಂಕ: 20-03-2019.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ನಾಗರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೇತುಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ರವರ ವಿರುದ್ಧ ಆಪಾದನೆ ಸಾಬೀತಾಗಿರುವುದರಿಂದ ಹಾಗೂ ಇವರು ಸರ್ಕಾರಿ ಸೇವೆಯಿಂದ ಈಗ ನಿವೃತ್ತರಾಗಿರುವ ಕಾರಣ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(ಎ) ಅನುಸಾರ **"ನಿವೃತ್ತಿ ವೇತನದಲ್ಲಿ ಶೇ.5% ರಷ್ಟು 5 ವರ್ಷಗಳವರೆಗೆ ತಡೆಹಿಡಿಯುವ"** ಎಂಬ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

21/3/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u>**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಮೈಸೂರು, ಮೈಸೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಟಿ.ನರಸೀಪುರ, ಮೈಸೂರು ಜಿಲ್ಲೆ.
6. ಶ್ರೀ ನಾಗರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೇತುಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.